4645 (5486) ಶ್ರೀ ಚಿಕ್ಕನಗೌಡ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಲಘಟಗಿ ವಿಧಾನಸಭಾ ಕ್ಷೇತ್ರದಲ್ಲಿರುವ ಹಿಂದುಳಿದ ವರ್ಗಗಳ ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು;

ಆ) ಹಿಂದುಳಿದ ವರ್ಗಗಳ ಮತ್ತು ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು;

ಇ) ಕಲಘಟಗಿ ಕ್ಷೇತ್ರದಲ್ಲಿ ಯಾವ ಯಾವ ಗ್ರಾಮಗಳಲ್ಲಿ ಹಿಂದುಳಿದ ಹಾಗೂ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳ ಮಂಜೂರಾತಿಗೆ ಪ್ರಸ್ತಾವನೆ ಬಂದಿದೆ?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಕಲಘಟಗಿ ವಿಧಾನ ಸಭಾ ಕ್ಷೇತ್ರದಲ್ಲಿರುವ ಹಿಂದುಳಿದ ವರ್ಗಗಳ ಇಲಾಖೆಯ 6 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಮತ್ತು ಪರಿಶಿಷ್ಟ ವರ್ಗಗಳ 4 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿವೆ.

ಆ) ಹೌದು, ವಿದ್ಯಾರ್ಥಿ ನಿಲಯಗಳನ್ನು ಬೇಡಿಕೆ, ಸೂಕ್ತತೆ ಹಾಗೂ ಆಯವ್ಯಯದ ಲಭ್ಯತೆಯನ್ನಾಧರಿಸಿ ಮಂಜೂರು ಮಾಡಲು ಪರಿಶೀಲಿಸಲಾಗುತ್ತಿದ್ದು, ಅದರಂತೆ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಧಾರವಾಡ ಜಿಲ್ಲೆಯ ಕಲಘಟಗಿ ಮತಕ್ಷೇತ್ರದಲ್ಲಿ ಕೆಳಕಂಡ ಸ್ಥಳಗಳಲ್ಲಿ ಹಿಂದುಳಿದ ವರ್ಗಗಳ 4 ಮೆಟ್ರಿಕ್ ಪೂರ್ವ ಹಾಗೂ 2 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರಾರಂಭಕ್ಕಾಗಿ ಬೇಡಿಕೆಗಳು ಬಂದಿರುತ್ತವೆ.

1. <u>ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು</u>

1. ಮಿಶ್ರಿಕೋಟೆ	ಬಾಲಕ
2. ಹಿರೇಹೊನ್ನಿನಹಳ್ಳಿ	ಬಾಲಕ
3. ದುಮ್ಮವಾಡ	ಬಾಲಕ
4. ಕಲ್‌ಘಟಗಿ ಟೌನ್	ಬಾಲಕಿ

2. <u>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು</u>

1. ಕಲ್‌ಘಟಗಿ ಟೌನ್	ಬಾಲಕ
2. ಕಲ್‌ಘಟಗಿ ಟೌನ್	ಬಾಲಕಿ

ಹಿರೇಹೊನ್ನಳ್ಳಿ, ತುಂಬವಾಡ, ಮೊಮ್ಮಿಘಟ್ಟ ಮತ್ತು ಬಿ. ಸಿಗ್ಗಿಗಟ್ಟಿ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿಯ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಬೇಡಿಕೆ ಬಂದಿರುತ್ತದೆ.

ಕಲ್‌ಘಟಗಿ ವಿಧಾನಸಭಾ ಕ್ಷೇತ್ರದಲ್ಲಿ ಈ ಕೆಳಕಂಡ ಸ್ಥಳಗಳಲ್ಲಿ ಪರಿಶಿಷ್ಟ ವರ್ಗದ ಮಂಜೂರಾತಿಗೆ ಪ್ರಸ್ತಾವನೆ ಬಂದಿರುತ್ತದೆ.

1. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳು :-

1. ಬಮ್ಮಿಗಟ್ಟ ಬಾಲಕ
2. ದುಮ್ಮವಾಡ ಬಾಲಕ
3. ಸಂಶಿ ಬಾಲಕ

4646 (5012) ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತರ ಹಿಂದುಳಿದ ವರ್ಗದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಲು ಎಷ್ಟು ಕಾಲಾವಧಿ ನಿರ್ಧರಿಸಲಾಗಿದೆ;

ಆ) ಇದರಿಂದ ಸಾರ್ವಜನಿಕರಿಗೆ ಅದರಲ್ಲೂ ಶೈಕ್ಷಣಿಕ ವಿದ್ಯಾರ್ಥಿಗಳಿಗೆ ಹಾಗೂ ಉದ್ಯೋಗಾಂಕ್ಷೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹತ್ತು ದಿನಗಳ ಕಾಲಾವಧಿಯನ್ನು ನಿಗದಿಪಡಿಸಲಾಗುತ್ತದೆ.

ಆ) ಜಾತಿ ಆದಾಯ ಪ್ರಮಾಣ ಪತ್ರ ನೀಡುವ ಮುನ್ನ ತಹಶೀಲ್ದಾರ್ ರವರ ಕಛೇರಿಯಲ್ಲಿ ಸಲ್ಲಿಸಲಾಗುವ ಅರ್ಜಿಗಳನ್ನು ಸ್ಥಳೀಯ ವಿಚಾರಣೆ ಮತ್ತು ಗ್ರಾಮ ಲೆಕ್ಕಿಗರು ಹಾಗೂ ರಾಜಸ್ವ ನಿರೀಕ್ಷಕರು ಅವರುಗಳಿಂದ ವರದಿಗಳನ್ನು ಪಡೆದು ಅರ್ಜಿದಾರರು ಕೋರಿರುವ ಮೀಸಲಾತಿಗೆ ಅರ್ಹರಿರುವುದನ್ನು ಖಚಿತ ಪಡಿಸಿಕೊಂಡು ಪ್ರಮಾಣ ಪತ್ರ ನೀಡಬೇಕಾಗುತ್ತದೆ. ಅದರಿಂದ ಸರ್ಕಾರದ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ಕಾಲಾವಧಿ, ಸೂಕ್ತವಾಗಿರುತ್ತದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗಕ್ಕೆ ಒಮ್ಮೆ ವಿತರಿಸಿದ ಜಾತಿ ಪ್ರಮಾಣ ಪತ್ರ ರದ್ದು ಪಡಿಸುವವರೆಗೆ ಜಾರಿಯಲ್ಲಿರುತ್ತದೆ. ಆದಾಯ ಪ್ರಮಾಣ ಪತ್ರ ವರ್ಷಗಳವರೆಗೆ ಉಪಯೋಗಿಸಿಕೊಳ್ಳಲು ಅವಕಾಶವಿರುತ್ತದೆ. (ವಿದ್ಯಾಭ್ಯಾಸಕ್ಕಾಗಿ ಮಾತ್ರ)

ಅದರಿಂದ ವಿದ್ಯಾರ್ಥಿಗಳಿಗೆ ಸಮಸ್ಯೆಗಳು ಉಂಟಾಗುವ ಪರಿಸ್ಥಿತಿ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.